Date : 02.04.2026

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ ಕೆ.ಎಸ್.ಟಿ. ವಕೀಲರಿಂದ –**

ನಾನು ಈ ಕೇಸಿನಲ್ಲಿ 1 ನೇ ಅರ್ಜಿದಾರನಿದ್ದು, 2 ನೇ ಅರ್ಜಿದಾರನು ನನ್ನ ತಮ್ಮನಿದ್ದು, ನನ್ನ ಮುಖ್ಯವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸರಿ ಇರುತ್ತವೆ.

ನನ್ನ ಸಾಕ್ಷಿಗೆ ಬೆಂಬಲಿತವಾಗಿ ಚಳ್ಳಕೆರೆ ಪಟ್ಟಣದ ಸರ್ವೆ ನಂ. 185/3 ಆಸ್ತಿಯ ಬಗ್ಗೆ ಇರುವ ಒಂದು ಪಹಣಿ ಪ್ರತಿ ಹಾಗೂ ಚಳ್ಳಕೆರೆ ತಾಲ್ಲೂಕು ತಹಶೀಲ್ದಾರ್ ರವರು ನೀಡಿದ ಹಿಂಬರಹ ಹಾಜರುಪಡಿಸಿದ್ದು,ಅವುಗಳನ್ನು ಕ್ರಮವಾಗಿ ನಿಪಿ–1 ಮತ್ತು 2 ಎಂದು ಗುರುತಿಸಲಾಯಿತು.

ನನ್ನ ತಾಯಿಯಾದ ಶ್ರೀಮತಿ ಗಂಗಮ್ಮ ಇವರು ದಿಃ 25.09.2012 ರಂದು ನನ್ನ ಮತ್ತು ನನ್ನ ಸಹೋದರನ ಹೆಸರಿಗೆ ಬರೆದಿರುವ ನೊಂದಣಿ ಮರಣಶಾಸನ ಪತ್ರ ಹಾಜರುಪಡಿಸಿರುತ್ತೇನೆ.

(ಈ ಹಂತದಲ್ಲಿ ಮುಂದುವರಿದ ಮುಖ್ಯವಿಚಾರಣೆಗಾಗಿ ವಕೀಲರು ಕಾಲಾವಕಾಶ ಕೋರುತ್ತಿದ್ದು, ಕಾಲಾವಕಾಶ ನೀಡಿ ಮುಖ್ಯವಿಚಾರಣೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)

*ಓದಿ ಹೇಳಿ ಕೇಳಿ ಸರಿ ಇದೆ.*

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿತ್ರದುರ್ಗ.